**Akashvani : Bangalore**
**Regional Bulletin In Kannada**
**03.06.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**03.06.2025 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

೧. ವೈದ್ಯಕೀಯ ಕ್ಷೇತ್ರದಲ್ಲಿ ನಿರಂತರ ಸಂಶೋಧನೆ ನಡೆಸುವಂತೆ ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಕರೆ

೨. ಅಲಮಟ್ಟಿ ಅಣೆಕಟ್ಟು ಎತ್ತರ ವಿವಾದ ; ಪ್ರಧಾನಿ, ಕೇಂದ್ರ ಜಲಶಕ್ತಿ ಸಚಿವರ ಭೇಟಿಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿರ್ಧಾರ

೩. ನೋಂದಣಿ ಮಾಡಿರುವ ಅನ್ನದಾತರ ಜೋಳ ಖರೀದಿಸುವಂತೆ ಆಹಾರ ಸಚಿವರಿಗೆ ರೈತರ ಮನವಿ

೪. ರಾಜ್ಯದಲ್ಲಿ ಕಮಲಹಾಸನ್ ನಟನೆಯ ಥಗ್‌ಲೈಫ್ ಚಿತ್ರ ಬಿಡುಗಡೆ ಸದ್ಯಕ್ಕಿಲ್ಲ

೫. ಐಪಿಎಲ್ ಟಿ-೨೦ ಕ್ರಿಕೆಟ್ ; ರಾಯಲ್ ಚಾಲೆಂಜರ್ಸ್ ಬೆಂಗಳೂರು-ಪಂಜಾಬ್ ಕಿಂಗ್ಸ್ ನಡುವಿನ ಫೈನಲ್ ಕದನಕ್ಕೆ ಕ್ಷಣಗಣನೆ

**<><*<><>*><>**

ವೈದ್ಯಕೀಯ ಕ್ಷೇತ್ರದಲ್ಲಿ ಹೊಸ ಹೊಸ ಸಂಶೋಧನೆಗೆ ವಿಫುಲ ಅವಕಾಶಗಳಿದ್ದು, ನಿರಂತರ ಅಧ್ಯಯನ ಮೂಲಕ ಸಾಧಿಸಬೇಕೆಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಜೆ.ಪಿ. ನಡ್ಡಾ ವಿದ್ಯಾರ್ಥಿಗಳಿಗೆ ಕರೆ ನೀಡಿದ್ದಾರೆ. ಬೆಳಗಾವಿಯ ಕೆಎಲ್ಇ ವಿಶ್ವ ವಿದ್ಯಾಲಯದಲ್ಲಿ ನಡೆದ ೧೫ನೇ ಘಟಿಕೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮುಂದಿನ ಆಡಳಿತಾವಧಿಯ ೫ ವರ್ಷಗಳಲ್ಲಿ ಸ್ನಾತಕ-ಸ್ನಾತಕೋತ್ತರ ವೈದ್ಯಕೀಯ ಸೀಟುಗಳನ್ನು ೭೫ ಸಾವಿರಕ್ಕೆ ಹೆಚ್ಚಳ ಮಾಡುವ ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದ್ದಾರೆ. ಹೊಸ ಆರೋಗ್ಯ ನೀತಿಯ ಮೂಲಕ ರೋಗ ತಡೆಗಟ್ಟುವಿಕೆ, ಗುಣಪಡಿಸುವಿಕೆ, ಉಪಶಮನ ಮತ್ತು ಆರೋಗ್ಯ ಶಿಕ್ಷಣಕ್ಕೆ ಕೇಂದ್ರ ಸರ್ಕಾರ ಒತ್ತು ನೀಡುತ್ತಿದೆ ಎಂದು ತಿಳಿಸಿದ್ದಾರೆ. ದೇಶಾದ್ಯಂತ ೧ ಲಕ್ಷದ ೭೭ ಸಾವಿರ ಆಯುಷ್ಮಾನ್ ಆರೋಗ್ಯ ಮಂದಿರಗಳನ್ನು ರೋಗಗಳನ್ನು ಪತ್ತೆ ಹಚ್ಚಲು ಹಾಗೂ ತಡೆಗಟ್ಟಲು, ಸಾಮೂಹಿಕ ತಪಾಸಣೆ ನಡೆಸಲು ತೆರೆಯಲಾಗಿದೆ. ಇದರ ಭಾಗವಾಗಿ ೨೯ ಕೋಟಿ ೩೫ ಲಕ್ಷ ಜನರನ್ನು ಬಾಯಿಯ ಕ್ಯಾನ್ಸರ್ ಕುರಿತಂತೆ ಪರೀಕ್ಷಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಜೆ.ಪಿ. ನಡ್ಡಾ

**<><*<><>*><>**

ಆಲಮಟ್ಟಿ ಅಣೆಕಟ್ಟು ವಿವಾದ ಕುರಿತಂತೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರನ್ನು ಶೀಘ್ರವೇ ಭೇಟಿ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಾರಾಷ್ಟ್ರ ಮುಖ್ಯಮಂತ್ರಿ ಬರೆದ ಪತ್ರ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇನ್ನೆರಡು ದಿನಗಳಲ್ಲಿ ಉತ್ತರ ನೀಡಲಿದ್ದಾರೆ ಎಂದು ಹೇಳಿದ್ದಾರೆ. ಇದೇ ವೇಳೆ ತಮಿಳು ನಟ ಕಮಲಹಾಸನ್ ವಿವಾದಾತ್ಮಕ ಹೇಳಿಕೆ ಕುರಿತಂತೆ ನ್ಯಾಯಾಲಯದ ಆದೇಶ ಪಾಲಿಸುವ ವಿಶ್ವಾಸವಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ಬೆಂಗಳೂರಿನ ವಸಂತನಗರದಲ್ಲಿರುವ ಆಹಾರ ಭವನದಲ್ಲಿಂದು ರಾಯಚೂರು ಜಿಲ್ಲೆಯ ರೈತ ಮುಖಂಡರ ನಿಯೋಗದೊಂದಿಗೆ ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಸಭೆ ನಡೆಸಿದರು. ಶಾಸಕ ಬಸವನಗೌಡ ಬಾದರ್ಲಿ ಅವರ ನೇತೃತ್ವದಲ್ಲಿ ರೈತರ ನಿಯೋಗ ಇಂದು ಸಚಿವರನ್ನು ಭೇಟಿ ಮಾಡಿ ಚರ್ಚೆ ನಡೆಸಿದೆ. ಮುಂಗಾರು ಮತ್ತು ಹಿಂಗಾರಿನಲ್ಲಿ ರೈತರು ಹೆಚ್ಚಾಗಿ ಜೋಳ ಬೆಳೆಯುವ ಹಿನ್ನೆಲೆಯಲ್ಲಿ ಸರ್ಕಾರ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ನೋಂದಣಿ ಮಾಡಿರುವ ಜೋಳ ಖರೀದಿಸಿದರೆ ರೈತರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ. ಈ ಕುರಿತಂತೆ ಮುಂದಿನ ಸಚಿವ ಸಂಪುಟದ ಉಪಸಮಿತಿ ಸಭೆಯಲ್ಲಿ ಈ ಕುರಿತು ಸೂಕ್ತ ನಿರ್ಧಾರ ತೆಗೆದುಕೊಳ್ಳಲಾಗುವುದು ಸಚಿವರು ಭರವಸೆ ನೀಡಿದ್ದಾರೆ.

**<><*<><>*><>**

ಕನ್ನಡ ಭಾಷೆಯ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡಿರುವ ನಟ ಕಮಲ ಹಾಸನ್ ನಟನೆಯ ಥಗ್‌ಲೈಫ್ ಚಿತ್ರ ರಾಜ್ಯದಲ್ಲಿ ಬಿಡುಗಡೆ ಮಾಡುತ್ತಿಲ್ಲ ಎಂದು ಕಮಲ್ ಪರ ವಕೀಲರು ಉಚ್ಚನ್ಯಾಯಾಲಯಕ್ಕೆ ತಿಳಿಸಿದ್ದಾರೆ. ವಿಚಾರಣೆ ನಡೆಸಿದ ನ್ಯಾಯಾಲಯ ಅರ್ಜಿಯನ್ನು ಜೂನ್ ೧೦ಕ್ಕೆ ಮುಂದೂಡಿದೆ. ಜೂನ್ ೧೦ರೊಳಗೆ ಫಿಲಂ ಚೇಂಬರ್ ಜೊತೆ ಮಾತುಕತೆ ನಡೆಸಿ, ವಿವಾದ ಇತ್ಯರ್ಥ ಮಾಡಿಕೊಳ್ಳುವಂತೆ ಸೂಚಿಸಿದೆ. ಅಲ್ಲಿಯವರೆಗೆ ಕರ್ನಾಟಕದಲ್ಲಿ ಥಗ್‌ಲೈಫ್ ಬಿಡುಗಡೆ ಮಾಡದಂತೆ ನಿರ್ದೇಶನ ನೀಡಿದೆ. ಇದೇ ವೇಳೆ ಕಮಲಹಾಸನ್ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷ ನರಸಿಂಹಲು ಅವರಿಗೆ ಪತ್ರ ಬರೆದು ತಮ್ಮ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಜನರು "ಪ್ರಕೃತಿಯ ಬಗ್ಗೆ ಪ್ರೀತಿ ಮತ್ತು ಗೌರವ, ಸರಳ ಜೀವನಶೈಲಿ ಮತ್ತು ಅರಣ್ಯದ ಬಗ್ಗೆ ಹೊಸ ಪ್ರಜ್ಞೆಯನ್ನು ಜಾಗೃತಗೊಳಿಸಬೇಕು" ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಸುಸ್ಥಿರತಾ ಸಮಾವೇಶದಲ್ಲಿ ಮಾತನಾಡಿದ ಅವರು, ಸುಸ್ಥಿರ ಅಭಿವೃದ್ಧಿಯು ತತ್ವಶಾಸ್ತ್ರ ಮತ್ತು ಸಿದ್ಧಾಂತದ ಮೂಲ ತತ್ವವಾಗಿದೆ ಎಂದು ಹೇಳಿದ್ದಾರೆ. ಬೆಂಗಳೂರು ನಗರವು ಇಂದು ನಾವೀನ್ಯತೆ, ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಮುಂಚೂಣಿಯಲ್ಲಿದೆ. ಆದರೆ ತ್ವರಿತ ನಗರೀಕರಣ, ಹವಾಮಾನ ಬದಲಾವಣೆ ಮತ್ತು ಸಂಪನ್ಮೂಲಗಳ ಮೇಲೆ ಹೆಚ್ಚುತ್ತಿರುವ ಒತ್ತಡದಂತಹ

ಸವಾಲುಗಳನ್ನು ಸಹ ಎದುರಿಸುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಪರಿಸರ ಸಂರಕ್ಷಣೆಯಲ್ಲಿ ಪ್ರತಿಯೊಬ್ಬರು ಕೈಜೋಡಿಸಬೇಕು ಎಂದು ಮನವಿ ಮಾಡಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಗದಗ ತಾಲೂಕಿನ ಐತಿಹಾಸಿಕ ಲಕ್ಕುಂಡಿ ಗ್ರಾಮದಲ್ಲಿ ಪ್ರಾಚೀನ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಉತ್ಖನನ ಕಾರ್ಯಕ್ಕೆ ಚಾಲನೆ ನೀಡಿದ್ದಾರೆ. ಬಳಿಕ ಮಾತನಾಡಿದ ಅವರು, ಲಕ್ಕುಂಡಿಯಲ್ಲಿ ಬಯಲು ವಸ್ತು ಸಂಗ್ರಹಾಲಯ ನಿರ್ಮಿಸಲಾಗುವುದು ಎಂದು ತಿಳಿಸಿದ್ದಾರೆ. ಪ್ರಾಚ್ಯವಸ್ತುಗಳು ದೊರೆತ ಜಾಗ ಮತ್ತು ಮನೆಗಳನ್ನು ಸರ್ಕಾರಕ್ಕೆ ಹಸ್ತಾಂತರಿಸಿದವರಿಗೆ ಧನ್ಯವಾದ ಅರ್ಪಿಸಿದ್ದಾರೆ. ಇದೇ ವೇಳೆ ರಾಜ್ಯದ ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಚ್ಚರಿಕೆ ನೀಡಿದ್ದಾರೆ.

ಧ್ವನಿ : ಸಿದ್ದರಾಮಯ್ಯ, ಮುಖ್ಯ ಮಂತ್ರಿಗಳು

<><*<><>*><>

ರಾಜ್ಯ ಸರ್ಕಾರ ಹಿಂದೂ ಕಾರ್ಯಕರ್ತರನ್ನು ಪೊಲೀಸರ ಮೂಲಕ ಹತ್ತಿಕ್ಕಲು ಪ್ರಯತ್ನಿಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಶಾಸಕರು ಮತ್ತು ಸಂಸದರ ನಿಯೋಗ ಈ ಕುರಿತಂತೆ ರಾಜ್ಯ ಪೊಲೀಸ್ ಮಹಾ ನಿರ್ದೇಶಕರನ್ನು ಭೇಟಿ ಮಾಡಲಿದೆ ಎಂದು ತಿಳಿಸಿದ್ದಾರೆ. ಹಿಂದೂ ಕಾರ್ಯಕರ್ತರ ಮೇಲೆ ಪೊಲೀಸರು ದೌರ್ಜನ್ಯ ನಡೆಸಿದರೆ ಬಿಜೆಪಿ ಸುಮ್ಮನೆ ಇರುವುದಿಲ್ಲ. ಭವಿಷ್ಯದ ಪರಿಣಾಮಗಳಿಗೆ ರಾಜ್ಯ ಸರ್ಕಾರವೇ ಹೊಣೆ ಎಂದು ಹೇಳಿದ್ದಾರೆ.

<><*<><>*><>

ಬಾಗಲಕೋಟೆ ಜಿಲ್ಲೆಯಲ್ಲಿ ದಾಖಲಾದ ದೌರ್ಜನ್ಯ ಪ್ರಕರಣಗಳಿಗೆ ನಿರ್ಲಕ್ಷ್ಯ ಸಲ್ಲದು ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಜಿಲ್ಲಾ ಮಟ್ಟದ ಜಾಗೃತಿ ನಿಯಂತ್ರಣ ಹಾಗೂ ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದೌರ್ಜನ್ಯ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಜನರು ನೆಮ್ಮದಿಯಿಂದ ಬದುಕುವಂತಹ ವಾತಾವರಣ ಸೃಷ್ಟಿಯಾಗಬೇಕಿದ್ದು, ಅದಕ್ಕಾಗಿ ಆಡಳಿತ ಚುರುಕಾಗಬೇಕು ಎಂದು ಅಧಿಕಾರಿಗಳಿಗೆ ಸಲಹೆ ನೀಡಿದ್ದಾರೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಅರಣ್ಯ ವ್ಯಾಪ್ತಿಯಲ್ಲಿ ಸುಮಾರು ೪೩ ಎಕರೆ ಒತ್ತುವರಿಯಾಗಿದ್ದ ಕಾಫಿ ತೋಟವನ್ನು ಇಂದು ಅರಣ್ಯ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ ತೆರವುಗೊಳಿಸಿದ್ದಾರೆ. ಮುತ್ತೋಡಿ ವಲಯ ವ್ಯಾಪ್ತಿಯ ಕೆಸವಿನ ಮನೆ ಸರ್ವೆ ನಂ.೪೩ ರಲ್ಲಿ ವ್ಯಕ್ತಿಯೊಬ್ಬರು ೪೩ ಎಕರೆ ಅರಣ್ಯ ಒತ್ತುವರಿ ಮಾಡಿ ಕಾಫಿ ತೋಟ ಮಾಡಿದ್ದರು. ಈ ಬಗ್ಗೆ ಪ್ರಕರಣ ದಾಖಲಾಗಿದ್ದು

ನ್ಯಾಯಾಲಯದ ಆದೇಶದಂತೆ ಅರಣ್ಯ ಅಧಿಕಾರಿಗಳು ಹಾಗು ಪೊಲೀಸ್ ಇಲಾಖೆ ಕಾರ್ಯಾಚರಣೆ ನಡೆಸಿ ಕಾಫಿ ಗಿಡಗಳನ್ನು ತೆರವುಗೊಳಿಸಿದ್ದಾರೆ. ಈ ಕಾಫಿ ತೋಟವನ್ನು ಅರಣ್ಯ ಇಲಾಖೆ ವಶಕ್ಕೆ ಪಡೆದುಕೊಂಡಿದೆ.

**<><*<><>*><>**

೧೮ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಫೈನಲ್ ಪಂದ್ಯಕ್ಕೆ ಕ್ಷಣಗಣನೆ ಆರಂಭವಾಗಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಪಂಜಾಬ್ ಕಿಂಗ್ಸ್ ತಂಡಗಳು ಪ್ರಶಸ್ತಿಗಾಗಿ ಸೆಣಸಲಿವೆ. ಈ ಸಮಾರಂಭವನ್ನು ಭಾರತೀಯ ಸೇನೆಗೆ ಸಮರ್ಪಿಸಲು ಬಿಸಿಸಿಐ ನಿರ್ಧರಿಸಿದೆ. ಪಂದ್ಯ ಆರಂಭಕ್ಕೂ ಮುನ್ನ ಅಮಹದಾಬಾದ್‌ನಲ್ಲಿ ಮಳೆಯ ಸಿಂಚನವಾಗಿದೆ. ಐಪಿಎಲ್ ಟೂರ್ನಿಯಲ್ಲಿ ಪಂಜಾಬ್ ವಿರುದ್ಧ ಫೈನಲ್ ಪಂದ್ಯದಲ್ಲಿ ಕಣಕ್ಕಿಳಿಯುತ್ತಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಹಿರಿಯ ಕ್ರಿಕೆಟ್ ಆಟಗಾರ ಅನಿಲ್ ಕುಂಬ್ಳೆ ಸೇರಿದಂತೆ ಹಲವು ಗಣ್ಯರು ಶುಭ ಹಾರೈಸಿದ್ದಾರೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ದಾವಣಗೆರೆ ನಗರ ಸ್ಥಳೀಯ ಸಂಸ್ಥೆಗಳು ಮತ್ತು ಗ್ರಾಮ ಪಂಚಾಯಿತಿಗಳು ಅಭಿವೃದ್ದಿಗೆ ಸಂಪನ್ಮೂಲಗಳ ಕ್ರೋಢಿಕರಣಕ್ಕೆ ಒತ್ತು ನೀಡುವ ಅಗತ್ಯವಿದೆ ಎಂದು ೫ನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷ ಡಾ; ಸಿ.ನಾರಾಯಣಸ್ವಾಮಿ ತಿಳಿಸಿದ್ದಾರೆ.

೨. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಕೊರೋನಾ ಸೋಂಕಿನ ಯಾವುದೇ ಆತಂಕ ಇಲ್ಲ ಎಂದು ದಕ್ಷಿಣ ಕನ್ನಡ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಚ್.ಆರ್. ತಿಮ್ಮಯ್ಯ ಸ್ಪಷ್ಟಪಡಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರತ್ರಿ ೭.೩೫ ಕ್ಕೆ <>*><>**